**ದಿನಾಂಕಃ 25-02-2021 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ವಾದಿ ಪರ ಶ್ರೀ ಕೆ ಬಿ ಬಿ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಸಾಕ್ಷಿ ಪ್ರಮಾಣ ಪತ್ರವನ್ನು ಈ ದಿನ ನ್ಯಾಯಾಲಯಕ್ಕೆ ಸಲ್ಲಿಸಿದ್ದು ಸದರಿ ಅಂಶಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಹೇಳಿರುವ ಅಂಶಗಳೆಲ್ಲಾ ಸತ್ಯವಾಗಿರುತ್ತದೆ ಹಾಗೂ ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ದಾವೆಗೆ ಸಂಬಂಧಿಸಿದಂತೆ ಈ ಕೆಳಗಿನ ದಾಖಲಾತಿಗಳನ್ನು ಹಾಜರು ಮಾಡುತ್ತಿದ್ದು ಸದರಿ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಿಕೊಳ್ಳಲು ಕೋರುತ್ತೇನೆ.

1. ದಿಃ 13-03-1993 ರ ಕ್ರಯ ಕರಾರು ಪತ್ರವನ್ನು ಹಾಜರು ಪಡಿಸಿದ್ದು, ಅದನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ-1 ಎಂದು ಗುರುತಿಸಲಾಯಿತು.
2. ನನ್ನ ಮಗ ವ್ಯಾಸಂಗ ದೃಢೀಕರಣ ಪತ್ರದ ದೃಢೀಕೃತ ಪತ್ರವನ್ನು ಹಾಜರು ಪಡಿಸಿದ್ದು, ಅದನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ-2 ಎಂದು ಗುರುತಿಸಲಾಯಿತು.
3. ನನ್ನ ಗಂಡನ ಮರಣ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು, ಅದನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ-3 ಎಂದು ಗುರುತಿಸಲಾಯಿತು.
4. ನನ್ನ ಗಂಡನ ಮೊದಲನೇ ಹೆಂಡತಿ ಸುಪ್ರಿಯ ರವರ ಮರಣ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು, ಅದನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ-4 ಎಂದು ಗುರುತಿಸಲಾಯಿತು.
5. ದಿಃ 13-01-2014 ರ ಕ್ರಯ ಪತ್ರವನ್ನು ಹಾಜರು ಪಡಿಸಿದ್ದು, ಅದನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ-5 ಎಂದು ಗುರುತಿಸಲಾಯಿತು.
6. ನಮೂನೆ 15 ಇ.ಸಿ ಯ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು, ಅದನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ-6 ಎಂದು ಗುರುತಿಸಲಾಯಿತು.
7. ತೆರಿಗೆ ರಸೀದಿಯನ್ನು ಹಾಜರು ಪಡಿಸಿದ್ದು, ಅದನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ-7 ಎಂದು ಗುರುತಿಸಲಾಯಿತು.
8. ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು, ಅದನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ-8 ಎಂದು ಗುರುತಿಸಲಾಯಿತು.
9. ಎಂ ಆರ್ ನ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು, ಅದನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ.9 ಎಂದು ಗುರುತಿಸಲಾಯಿತು.
10. ದಿಃ 25-01-1999 ರ ಪಾರಿಕತ್ ನ್ನು ಹಾಜರು ಪಡಿಸಿದ್ದು, ಅದನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿಪಿ-10 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯಲ್ಲಿ ಕೋರಿರುವಂತೆ ದಾವೆಯನ್ನು ನನ್ನ ಪರವಾಗಿ ಡಿಕ್ರಿ ಮಾಡಬೇಕೆಂದು ಕೋರಿಕೊಳ್ಳುತ್ತೇನೆ.

ಪ್ರತಿವಾದಿ ಹಾಜರಿದ್ದು ಪಾಟೀ ಸವಾಲಿಗೆ ಕಾಲಾವಕಾಶವನ್ನು ಕೋರಿದ್ದು ಕೋರಿಕೆ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಪ್ರಧಾನ ಸಿವಿಲ್ ನ್ಯಾಯಾಧೀಶರು
ತಿಪಟೂರು.